# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 202 (165) |
| ಸದಸ್ಯರ ಹೆಸರು | : | ಶ್ರೀ ಎನ್. ರವಿ ಕುಮಾರ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 16.07.2024 |
| ಉತ್ತರಿಸಬೇಕಾದವರು | : | ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ 4000 ಕೋಟಿಗೂ ಹೆಚ್ಚಿನ ಮೊತ್ತದ ಭ್ರಷ್ಟಾಚಾರದ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರ್ಕಾರದ ನಿಲುವೇನು: | ಗಮನಕ್ಕೆ ಬಂದಿರುತ್ತದೆ.<br>ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಿವೇಶನ ಹಂಚಿಕೆ ಹಗರಣದ ಬಗ್ಗೆ ಗಮನಕ್ಕೆ ಬಂದ ನಂತರ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಕಾಯ್ದೆ/ ನಿಯಮ / ವಲಯನಿಯಮಾವಳಿ / ಸರ್ಕಾರದ ಆದೇಶ / ಸರ್ಕಾರದ ಸುತ್ತೋಲೆಗಳನ್ವಯ ಸೂಚನೆಗಳನ್ನು ಪಾಲಿಸದೇ ಅವ್ಯವಹಾರ ಮತ್ತು ಕರ್ತವ್ಯಲೋಪವೆಸಗಿರುವ ಪ್ರಕರಣಗಳ ಬಗ್ಗೆ ಕೂಲಂಕುಷವಾಗಿ ತನಿಖೆ ನಡೆಸಿ ವರದಿ ಸಲ್ಲಿಸಲು ಸರ್ಕಾರದ ಆದೇಶ ಸಂಖ್ಯೆ: ನಅಇ 211 ಮೈಅಪ್ರಾ 2024, ದಿನಾಂಕ:01.07.2024 ಹಾಗೂ 03.07.2024 ರಲ್ಲಿ ಸಮಿತಿ ರಚಿಸಿ ಆದೇಶಿಸಲಾಗಿದೆ **(ಅನುಬಂಧ).** |
| ಆ) | ನಗರಾಭಿವೃದ್ಧಿ ಪ್ರಾಧಿಕಾರಿದಲ್ಲಿ 4000 ಕೋಟಿಗೂ ಹೆಚ್ಚಿನ ಮೊತ್ತದ ಭ್ರಷ್ಟಾಚಾರ ನಡೆಸಿದ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು; ಎಷ್ಟು ಅಧಿಕಾರಿಗಳನ್ನು ಅಮಾನತ್ತು ಮಾಡಲಾಗಿದೆ; (ವಿವರ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: ನಅಇ 211 ಮೈಅಪ್ರಾ 2024, ದಿನಾಂಕ:01.07.2024 ಹಾಗೂ 03.07.2024 ರಲ್ಲಿ ರಚಿಸಲಾಗಿರುವ ತನಿಖಾ ಸಮಿತಿಯು ನೀಡುವ ತನಿಖಾ ವರದಿಯನ್ನು ಆಧರಿಸಿ ಕರ್ತವ್ಯಲೋಪವೆಸಗಿರುವ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಶಿಸ್ತುಕ್ರಮ ಜರುಗಿಸಲು ಕ್ರಮ ವಹಿಸಲಾಗುವುದು. |
| ಇ) | ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಭ್ರಷ್ಟಾಚಾರ ನಡೆಸಿದ ಅಧಿಕಾರಿಗಳ ಮೇಲೆ ಕ್ರಿಮಿನಲ್ ಕೇಸು ದಾಖಲಿಸಲಾಗಿದೆಯೇ; ಇಲ್ಲವಾದಲ್ಲಿ, ಯಾವಾಗ ಕೇಸು ದಾಖಲಿಸಲಾಗುವುದು; ನಷ್ಟವಾದ ಮೊತ್ತವನ್ನು ಅಧಿಕಾರಿಗಳಿಂದ ವಸೂಲಿ ಮಾಡಲು ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | |

ನಅಇ 237 ಮೈಅಪ್ರಾ 2024(ಇ)

(**ಬಿ.ಎಸ್. ಸುರೇಶ**)
ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಬದಲಿ ನಿವೇಶನ ಹಂಚಿಕೆಯಲ್ಲಿ ನಡೆದಿರುವ ಅವ್ಯವಹಾರದ ಬಗ್ಗೆ ತನಿಖೆ ನಡೆಸಲು ಸಮಿತಿ ರಚಿಸುವ ಬಗ್ಗೆ.

**ಓದಲಾಗಿದೆ:** ವಿಶ್ವವಾಣಿ ಪತ್ರಿಕೆಯಲ್ಲಿನ ವರದಿ

*****

**ಪ್ರಸ್ತಾವನೆ:**

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಡೆದಿದೆ ಎನ್ನಲಾದ ನಿವೇಶನ ಹಂಚಿಕೆ ಹಗರಣದ ಬಗ್ಗೆ ವಿಶ್ವವಾಣಿ ರಾಜ್ಯ ಮಟ್ಟದ ಕನ್ನಡದ ಪತ್ರಿಕೆಯಲ್ಲಿ **"ಮೈಸೂರು ಮುಡಾದಲ್ಲಿ 3000 ಸೈಟ್ ಹಂಚಿಕೆ ಹಗರಣ"**ಎಂಬ ತಲೆಬರಹದಲ್ಲಿ ಪರಿಹಾರ ಸೈಟ್ ಹೆಸರಿನಲ್ಲಿ ಹೊಸದಂಧೆ, ಕೇಳಿದ್ದಕ್ಕಿಂತ ಹೆಚ್ಚು ನಿವೇಶನಗಳ ಹಂಚಿಕೆ ಈ ಬಗ್ಗೆ ತನಿಖೆಯೂ ಮೊಟಕು ಎಂಬ ಸುದ್ದಿ ಪ್ರಕಟವಾಗಿರುತ್ತದೆ. ಸದರಿ ವರದಿಯಲ್ಲಿ ಈ ಕೆಳಕಂಡ ಅಂಶಗಳನ್ನು ಪ್ರಮುಖವಾಗಿ ವಿವರರಿಸಲಾಗಿರುತ್ತದೆ.

- ಬಡಾವಣೆ ನಿರ್ಮಾಣಕ್ಕೆ ಜಮೀನು ನೀಡಿದ ರೈತರ ಹೆಸರಿನಲ್ಲಿ ಫಲಾನುಭವಿ ಎಂಬುದಾಗಿ ಹೇಳಿ ಒಂದು ನಿವೇಶನದ ಬದಲು 60ಕ್ಕೂ ಹೆಚ್ಚಿನ ನಿವೇಶನಗಳನ್ನು ನೀಡಿರುವುದು.
- ಫಲಾನುಭವಿಗಳು ಎಂದು ಹೇಳಿಕೊಂಡ ನೂರಾರು ಮಂದಿಗೆ ನಿಗಧಿಗಿಂತ ಹೆಚ್ಚಿನ ನಿವೇಶನಗಳನ್ನು ನೀಡಿರುವುದು.
- ಕಳೆದ ಎರಡು ವರ್ಷಗಳಲ್ಲಿ ಸುಮಾರು 3000ಕ್ಕೂ ಹೆಚ್ಚಿನ ನಿವೇಶನಗಳನ್ನು ಭೂಮೌಲ್ಯ ಹೆಚ್ಚಾಗಿರುವ ಪ್ರತಿಷ್ಠಿತ ಬಡಾವಣೆಗಳಾದ ವಿಜಯನಗರ, ದಟ್ಟಗಳ್ಳಿ, ಜೆ.ಪಿ.ನಗರ ಹಾಗೂ ಆರ್.ಟಿ. ನಗರಗಳಲ್ಲಿ ಹಂಚಿಕೆ ಮಾಡಿದ್ದು, ಈ ಮೂಲಕ ಪ್ರಾಧಿಕಾರಕ್ಕೆ ಕೋಟ್ಯಾಂತರ ರೂಪಾಯಿ ನಷ್ಟವಾಗಿರುವುದು.
- ಈ ರೀತಿ ಅಕ್ರಮ ನಿವೇಶನ ಹಂಚಿಕೆಗೆ ಬೇಕಾದ ದಾಖಲೆಗಳ ಸಿದ್ಧತೆ ಮತ್ತು ಅಗತ್ಯ ಪರಿಕರಗಳನ್ನು ಪೂರೈಸಲು ಒಂದು ವ್ಯವಸ್ಥಿತ ಜಾಲವಿದ್ದು, ಪ್ರಾಧಿಕಾರದ ಸಿಬ್ಬಂದಿಗಳೊಂದಿಗೆ ಸಂಪರ್ಕ ಸಾಧಿಸಿ ವ್ಯವಸ್ಥೆಯಲ್ಲಿ ಭಾಗಿಯಾಗಿರುವುದಾಗಿ ತಿಳಿಸಲಾಗಿದೆ.
- ನಿಯಮಾನುಸಾರ ನಿವೇಶನ ಹಂಚಿಕೆಗೆ ಅರ್ಜಿ ಸಲ್ಲಿಸಿದ ಅರ್ಹ ಫಲಾನುಭವಿಗಳ ಬದಲಾಗಿ ನಿವೇಶನ ಹಂಚಿಕೆ ನಿಯಮಗಳನ್ನು ಉಲ್ಲಂಘಿಸಿ ಪ್ರಭಾವಿ ಮತ್ತು ಭೂ ದಲ್ಲಾಳಿಗಳಿಗೆ ಹಂಚುತ್ತಿರುವುದಾಗಿ ಸಲ್ಲಿಸಿರುವ ದೂರಿನಲ್ಲಿ ಪ್ರಸ್ತಾಪಿಸಲಾಗಿರುತ್ತದೆ.
- ಮುಂದುವರೆದು, ಬಡಾವಣೆ ನಿರ್ಮಾಣಕ್ಕೆ ಜಮೀನು ನೀಡಿದ ರೈತರಿಗೆ ನಿಗದಿತ ಪ್ರಮಾಣದಷ್ಟು ಪರಿಹಾರ ರೂಪದ ನಿವೇಶನಗಳನ್ನು ನೀಡಬೇಕಾಗಿದ್ದು, ಅಂತಹ ಬಡಾವಣೆಗಳಲ್ಲಿ ನಿವೇಶನ ಲಭ್ಯವಾಗದಿದ್ದಲ್ಲಿ ನಂತರ ಅಭಿವೃದ್ಧಿಯಾಗುವ



Scanned with OKEN Scanner

ಬಡಾವಣೆಗಳಲ್ಲಿ ನೀಡಬೇಕಾಗಿದ್ದು ಈ ಬಗ್ಗೆ ಸರ್ಕಾರದ ಅನುಮೋದನೆ ಪಡೆದು ಮುಂದುವರೆಯಬೇಕಾಗಿದ್ದು ಇಂತಹ ಪ್ರಕರಣಗಳಲ್ಲಿ ಒಂದು ನಿವೇಶನಕ್ಕೆ ಬದಲಾಗಿ ಹಲವಾರು ನಿವೇಶನಗಳನ್ನು ಅದರಲ್ಲೂ ಚಿಕ್ಕ ನಿವೇಶನಕ್ಕೆ ಬದಲಾಗಿ 50-80 ಅಳತೆಯ ನಿವೇಶನಗಳನ್ನು ಹಂಚಿಕೆ ಮಾಡಿರುವ ಅಂಶವನ್ನು ಪ್ರಕಟಿಸಲಾಗಿರುತ್ತದೆ.

ವಿಶ್ವವಾಣಿ ಪತ್ರಿಕೆಯ ವರದಿಯನ್ನು ಪರಿಶೀಲಿಸಲಾಗಿ, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಿವೇಶನ ಹಂಚಿಕೆಯಲ್ಲಿ ನಿಯಮ ಬಾಹಿರವಾಗಿ ನಿವೇಶನ ಹಂಚುವ ಮೂಲಕ ಹಗರಣ ನಡೆದಿರುವುದು ಇದರಿಂದ ಪ್ರಾಧಿಕಾರಕ್ಕೆ ಅಪಾರ ನಷ್ಟ ಉಂಟಾಗಿರುವುದು ಪತ್ರಿಕಾ ಪ್ರಕಟಣೆಗಳಿಂದ ಹಾಗೂ ಸಾರ್ವಜನಿಕರಿಂದ ಹಾಗೂ ಜನಪ್ರತಿನಿಧಿಗಳಿಂದ ಬರುತ್ತಿರುವ ಅನೇಕ ದೂರುಗಳಿಂದ, ನಿಯಮಬಾಹಿರ ಕ್ರಮವಹಿಸಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿದ್ದು, ಇದರ ಸತ್ಯಾಸ್ತ್ಯತೆಯನ್ನು ಅರಿಯಲು ಒಂದು ತನಿಖಾ ತಂಡವನ್ನು ನೇಮಿಸುವುದು ಸೂಕ್ತವೆಂದು ತೀರ್ಮಾನಿಸಲಾಗಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ನಅಇ 211 ಮೈಅಪ್ರಾ 2024, ಬೆಂಗಳೂರು, ದಿನಾಂಕ:01.07.2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಕಾಯ್ದೆ/ನಿಯಮ/ವಲಯ ನಿಯಮಾವಳಿ/ ಸರ್ಕಾರದ ಆದೇಶ/ಸರ್ಕಾರದ ಸುತ್ತೋಲೆಗಳನ್ವಯ ಸೂಚನೆಗಳನ್ನು ಪಾಲಿಸದೇ ಅವ್ಯವಹಾರ ಮತ್ತು ಕರ್ತವ್ಯ ಲೋಪವೆಸಗಿರುವ ಪ್ರಕರಣಗಳು ಹಾಗೂ ವಿಶ್ವವಾಣಿ ಪತ್ರಿಕೆಯಲ್ಲಿ ಪ್ರಕಟವಾಗಿರುವ ವರದಿಯ ಅಂಶಗಳ ಬಗ್ಗೆ ಕೂಲಂಕುಷವಾಗಿ ಪರಿಶೀಲಿಸಿ ಸೂಕ್ತ ದಾಖಲೆಗಳೊಂದಿಗೆ ತನಿಖೆ ನಡೆಸಿ ಸರ್ಕಾರಕ್ಕೆ ಸಮಗ್ರ ವರದಿಯನ್ನು ಸಲ್ಲಿಸಲು ಈ ಕೆಳಕಂಡ ಅಧಿಕಾರಿಗಳನ್ನು ಒಳಗೊಂಡಂತೆ ತನಿಖಾ ತಂಡವನ್ನು ನೇಮಿಸಿ ಆದೇಶಿಸಿದೆ.

| | | |
|---|---|---|
| 1 | ಶ್ರೀ ವೆಂಕಟಾಚಲಪತಿ ಆರ್. ಆಯುಕ್ತರು ನಗರಾಭಿವೃದ್ಧಿ ಪ್ರಾಧಿಕಾರಗಳು ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯ. | ಅಧ್ಯಕ್ಷರು |
| 2 | ಶ್ರೀ ಎಂ. ಸಿ ಶಶಿಕುಮಾರ್, ಅಪರ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ. | ಸದಸ್ಯರು |
| 3 | ಶ್ರೀಮತಿ ಶಾಂತಲ, ಜಂಟಿ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯ, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ. | ಸದಸ್ಯರು |
| 4 | ಶ್ರೀ ಪ್ರಕಾಶ್, ಉಪ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕೇಂದ್ರ ಕಛೇರಿ. | ಸದಸ್ಯರು |



Scanned with OKEN Scanner

**ಷರತ್ತುಗಳು:**

1. ಮೇಲ್ಕಂಡ ತನಿಖಾ ತಂಡವು 15 ದಿನದೊಳಗಾಗಿ ಸಮಗ್ರ ವರದಿಯನ್ನು ಸಲ್ಲಿಸತಕ್ಕದ್ದು.
2. ತನಿಖಾ ತಂಡವು ತನಿಖಾ ವರದಿಯೊಂದಿಗೆ ತೆಗೆದುಕೊಳ್ಳಬಹುದಾದ ಕ್ರಮಗಳ ಕುರಿತು ಸ್ಪಷ್ಟ ಅಭಿಪ್ರಾಯ ನೀಡತಕ್ಕದ್ದು.
3. ಸದರಿ ತನಿಖಾ ತಂಡಕ್ಕೆ ಅಗತ್ಯ ಮೂಲಭೂತ ಸೌಕರ್ಯ / ಸಿಬ್ಬಂದಿ ಹಾಗೂ ಸೂಕ್ತ ಸ್ಥಳವಕಾಶವನ್ನು ಆಯುಕ್ತರು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ರವರು ಒದಗಿಸಲು ಕ್ರಮವಹಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಲತಾ.ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ,
(ಅಭಿವೃದ್ಧಿ ಪ್ರಾಧಿಕಾರ ಮತ್ತು ನಯೋಸೇ)
ನಗರಾಭಿವೃದ್ಧಿ ಇಲಾಖೆ.

**ಇವರಿಗೆ:**

1. ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರಗಳು ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ ಬೆಂಗಳೂರು.
2. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು.
3. ಜಿಲ್ಲಾಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.
4. ಆಯುಕ್ತರು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು.
5. ಶ್ರೀ ಎಂ. ಸಿ ಶಶಿಕುಮಾರ್, ಅಪರ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ.
6. ಶ್ರೀಮತಿ ಶಾಂತಲ, ಜಂಟಿ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯ, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ.
7. ಶ್ರೀ ಪ್ರಕಾಶ್, ಉಪ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕೇಂದ್ರ ಕಛೇರಿ.

**ಪ್ರತಿ:**

1. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ
2. ಸರ್ಕಾರದ ಉಪ ಕಾರ್ಯದರ್ಶಿ-2, ರವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
3. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು



Scanned with OKEN Scanner

**ಕರ್ನಾಟಕ ಸರ್ಕಾರ**

ಸಂಖ್ಯೆ: ನಅಇ 211 ಮೈಅಪ್ರಾ 2024 (ಇ)

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ:03.07.2024.

**ತಿದ್ದುಪಡಿ**

ಸರ್ಕಾರದ ಆದೇಶ ಸಂಖ್ಯೆ: ನಅಇ 211 ಮೈಅಪ್ರಾ 2024, ದಿನಾಂಕ:01.07.2024 ರ ಆದೇಶ ಭಾಗದ ತನಿಖಾ ತಂಡದ ಪಟ್ಟಿಯಲ್ಲಿ ನಮೂದಿಸಿರುವ **ಈ ಕೆಳಕಂಡ ಅಧಿಕಾರಿಗಳ ಬದಲಾಗಿ**

| ಕ್ರ.ಸಂ. | ಹೆಸರು ಮತ್ತು ಹುದ್ದೆ | |
|---|---|---|
| 1 | ಶ್ರೀಮತಿ ಶಾಂತಲ, ಜಂಟಿ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯ, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ. | ಸದಸ್ಯರು |
| 2 | ಶ್ರೀ ಪ್ರಕಾಶ್, ಉಪ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕೇಂದ್ರ ಕಛೇರಿ. | ಸದಸ್ಯರು |

**ಈ ಕೆಳಗಿನ ಅಧಿಕಾರಿಗಳ ಹೆಸರನ್ನು ತಿದ್ದಿ ಓದಿಕೊಳ್ಳತಕ್ಕದ್ದು.**

| ಕ್ರ.ಸಂ. | ಹೆಸರು ಮತ್ತು ಹುದ್ದೆ | |
|---|---|---|
| 1 | ಶ್ರೀ ಎನ್.ಕೆ. ತಿಪ್ಪೇಸ್ವಾಮಿ, ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಕೇಂದ್ರ ಕಛೇರಿ, ಬೆಂಗಳೂರು. | ಸದಸ್ಯರು |
| 2 | ಶ್ರೀಮತಿ ನೂರ್ ಜಹರಾ ಖಾನಂ, ಕೆ.ಎ.ಎಸ್. (ಸೂ.ಟೈಂ.ಸ್ಕೇ.) ಆಯುಕ್ತರು, ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರ, ಮಂಗಳೂರು. | ಸದಸ್ಯರು |
| 3 | ಶ್ರೀಮತಿ ಗೀತಾ.ಎ., ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ಜಂಟಿ ನಿರ್ದೇಶಕರು, ಕೆ.ಯು.ಐ.ಡಿ.ಎಫ್.ಸಿ. | ಸದಸ್ಯರು |

ಮುಂದುವರೆದು, ಮೇಲ್ಕಂಡ ಆದೇಶದ ಪರತ್ತಿನ ಭಾಗದಲ್ಲಿ ಈ ಕೆಳಕಂಡ ಪರತ್ತನ್ನು ಸೇರಿಸಿ ಓದಿಕೊಳ್ಳತಕ್ಕದ್ದು.

1. ತನಿಖಾ ತಂಡದ ಅಧ್ಯಕ್ಷರಿಗೆ, ತನಿಖೆಗೆ ಪೂರಕವಾಗಿ ಅಗತ್ಯವಿರುವ ನುರಿತ ಅಧಿಕಾರಿಗಳನ್ನು ಸೇರ್ಪಡೆ ಮಾಡಿಕೊಳ್ಳುವ ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿದೆ.

Scanned with OKEN Scanner

ಉಳಿದಂತೆ ಸರ್ಕಾರದ ಆದೇಶ ಸಂಖ್ಯೆ: ನಅಇ 211 ಮೈಅಪ್ರಾ 2024, ದಿನಾಂಕ:01.07.2024 ರಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಲತಾ.ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ,
(ಅಭಿವೃದ್ಧಿ ಪ್ರಾಧಿಕಾರ ಮತ್ತು ನಯೋಸೇ)
ನಗರಾಭಿವೃದ್ಧಿ ಇಲಾಖೆ.

**ಇವರಿಗೆ:**

1. ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರಗಳು ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ ಬೆಂಗಳೂರು.
2. ಶ್ರೀ ಎನ್.ಕೆ. ತಿಪ್ಪೇಸ್ವಾಮಿ, ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಕೇಂದ್ರ ಕಛೇರಿ, ಬೆಂಗಳೂರು.
3. ಜಿಲ್ಲಾಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.
4. ಆಯುಕ್ತರು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು.
5. ಶ್ರೀ ಎಂ. ಸಿ. ಶಶಿಕುಮಾರ್, ಅಪರ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ.
6. ಶ್ರೀಮತಿ ಶಾಂತಲ, ಜಂಟಿ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯ, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ.
7. ಶ್ರೀಮತಿ ನೂರ್ ಜಹರಾ ಖಾನಂ, ಕೆ.ಎ.ಎಸ್. (ಸೂ.ಟೈಂ.ಸ್ಕೇ.) ಆಯುಕ್ತರು, ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರ, ಮಂಗಳೂರು.
8. ಶ್ರೀಮತಿ ಗೀತಾ.ಎ., ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ಜಂಟಿ ನಿರ್ದೇಶಕರು, ಕೆ.ಯು.ಐ.ಡಿ.ಎಫ್.ಸಿ.
9. ಶ್ರೀ ಪ್ರಕಾಶ್, ಉಪ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕೇಂದ್ರ ಕಛೇರಿ.

**ಪ್ರತಿ:**

1. ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ
3. ಸರ್ಕಾರದ ಉಪ ಕಾರ್ಯದರ್ಶಿ-2, ರವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು

Scanned with OKEN Scanner